# ದಿನಾಂಕ:28-08-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

## ವಿಷಯದ ಸಂಖ್ಯೆ: 7(72)/2010-11

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ವಾರ್ಡ್ ಸಂಖ್ಯೆ:127 (ಹಳೆ ವಾರ್ಡ್ ಸಂಖ್ಯೆ.38) ರ ಗಾರ್ಡನ್ ವಿಲಾಸ್, 7ನೇ 'ಎ' ಅಡ್ಡರಸ್ತೆಯಲ್ಲಿ ವೃಷಭಾವತಿ ಪ್ರೈಮರಿ ವ್ಯಾಲಿಯ ಎಡಭಾಗದಲ್ಲಿ ಆರ್.ಸಿ.ಸಿ. ತಡೆಗೋಡೆ ನಿರ್ಮಿಸುವ ಕಾಮಗಾರಿಗೆ ಸಂಬಂಧಿಸಿದಂತೆ, ದಿನಾಂಕ:23-09-2009 ಹಾಗೂ ದಿನಾಂಕ:29-09-2009 ರಂದು ರಾತ್ರಿ ಸುರಿದ ಧಾರಾಕಾರ ಮಳೆಯಿಂದಾಗಿ ವೃಷಭಾವತಿ ನಾಲೆಯ ರಾಜಕಾಲುವೆಯಲ್ಲಿ ನೀರು ಹರಿದು ಪ್ರವಾಹ ಉಂಟಾಗಿರುತ್ತದೆ. ಈ ಪ್ರವಾಹದಿಂದಾಗಿ ನಾಲೆಯ ಪಕ್ಕದಲ್ಲಿದ್ದ 2 ಅಂತಸ್ತಿನ ಮನೆಯು ಕುಸಿತಗೊಂಡಿದ್ದು, ಈ ವಿಷಯವು ದೈನಂದಿನ ಪ್ರಮುಖ ಪತ್ರಿಕೆಗಳಲ್ಲಿ ಹಾಗೂ ಟಿ.ವಿ. ಮಾಧ್ಯಮದಲ್ಲಿ ಪ್ರಸಾರವಾಗಿರುತ್ತದೆ. ಇದರಿಂದ ಅಕ್ಕಪಕ್ಕದ ಸಾರ್ವಜನಿಕರು ಗಾಬರಿಗೊಂಡು ಈ ಸ್ಥಳದಲ್ಲಿ ತಡೆಗೋಡೆ ನಿರ್ಮಾಣ ಮಾಡಲು ಪ್ರತಿಭಟನೆ ಮಾಡಿ ಹಾಗೂ ಸ್ಥಳಕ್ಕೆ ಭೇಟಿ ನೀಡಿದ್ದ ಪಾಲಿಕೆಯ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ತಡೆಗೋಡೆ ನಿರ್ಮಾಣ ಮಾಡಲು ತುರ್ತಾಗಿ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿರುತ್ತಾರೆ.

ಸ್ಥಳೀಯ ಶಾಸಕರು ಹಾಗೂ ಮಾಜಿ ಉಪ ಮಹಾಪೌರರು ಸ್ಥಳಕ್ಕೆ ಭೇಟಿ ನೀಡಿ ಕೂಡಲೇ ಆರ್.ಸಿ.ಸಿ. ತಡೆಗೋಡೆ ನಿರ್ಮಾಣ ಮಾಡಲು ಸೂಚಿಸಿರುತ್ತಾರೆ. ಈ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಇಲ್ಲದಿದ್ದ ಪಕ್ಷದಲ್ಲಿ ಇನ್ನೂ ಸುಮಾರು 10 ರಿಂದ 15 ಕುಟುಂಬಗಳಿಗೆ ಆಸ್ತಿ ಹಾನಿ ಹಾಗೂ ಪ್ರಾಣಾಪಾಯ ಇರುವುದರಿಂದ ಹಾಗೂ ಸ್ಥಳೀಯ ಶಾಸಕರ ಮತ್ತು ಸಾರ್ವಜನಿಕರ ಒತ್ತಾಯದ ಮೇರೆಗೆ ಮುಂದೆ ಆಗಬಹುದಾದ ಜೀವ ಹಾನಿ ಹಾಗೂ ಆಸ್ತಿ ಪಾಸ್ತಿ ಹಾನಿಗಳನ್ನು ಗಮನದಲ್ಲಿಟ್ಟುಕೊಂಡು, ಕಾಮಗಾರಿಯನ್ನು ಅನುಮೋದನೆ ನಿರೀಕ್ಷಿಸಿ ನೇರ ಗುತ್ತಿಗೆ ಆಧಾರದಲ್ಲಿ ಶ್ರೀ.ಎಲ್.ಚಂದ್ರಶೇಖರ್, ಗುತ್ತಿಗೆದಾರರಿಂದ ಕಾಮಗಾರಿಯನ್ನು ನಿರ್ವಹಿಸಿ ಪೂರ್ಣಗೊಳಿಸಲಾಗಿರುತ್ತದೆ. ಸಂಬಂಧಪಟ್ಟ ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ಹಾಗೂ ಪ್ರಧಾನ ಅಭಿಯಂತರರು ಕಾಮಗಾರಿಯನ್ನು ನಿರ್ವಹಿಸಿರುವ ಬಗ್ಗೆ ಪರಿಶೀಲಿಸಿ ದೃಢೀಕರಣ ನೀಡಿರುತ್ತಾರೆ.

ಸದರಿ ಕಾಮಗಾರಿಯನ್ನು ನಿರ್ವಹಿಸಿರುವ ಗುತ್ತಿಗೆದಾರರಿಗೆ ಇದುವರೆವಿಗೂ ಹಣ ಬಿಡುಗಡೆ ಮಾಡಿಲ್ಲದೇ ಇರುವುದರಿಂದ ಗುತ್ತಿಗೆದಾರರು ನಿರ್ವಹಿಸಿರುವ ಕಾಮಗಾರಿಯ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿರುವುದರಿಂದ, ಗುತ್ತಿಗೆದಾರರಿಗೆ ಹಣ ಬಿಡುಗಡೆ ಮಾಡಲು ಕಾಮಗಾರಿಯ ಅನುಮೋದನೆ ಅಗತ್ಯ ಇರುತ್ತದೆ.

ಈ ಹಿನ್ನಲೆಯಲ್ಲಿ, ಸದರಿ ಕಾಮಗಾರಿಯನ್ನು ಸಾರ್ವಜನಿಕ ಕೆಲಸಕಾರ್ಯಗಳ ಹಿತದೃಷ್ಟಿಯಿಂದ ಅನುಮೋದನೆ ನಿರೀಕ್ಷಿಸಿ ಈಗಾಗಲೇ ನಿರ್ವಹಿಸಿರುವುದರಿಂದ ಈ ಕೆಳಕಂಡ ಅಂಶಗಳಿಗೆ ಅನುಮೋದನೆ ಕೋರಿದೆ.

1. ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.33.50 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ.
2. ಸದರಿ ಕಾಮಗಾರಿಗೆ ಕಾಮಗಾರಿ ಸಂಕೇತ ನೀಡಲು ಅನುಮೋದನೆ.

3. ಈ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆಯನ್ನು ಪ್ರಕೃತಿ ವಿಕೋಪದಡಿಯಲ್ಲಿ ನೀಡಲು ಅನುಮೋದನೆ.

4. ಸದರಿ ಕಾಮಗಾರಿಗೆ ಅನುಮೋದನೆ ನಿರೀಕ್ಷಿಸಿ, ನೇರ ಗುತ್ತಿಗೆ ಅಡಿಯಲ್ಲಿ ಶ್ರೀ. ಎಲ್.ಚಂದ್ರಶೇಖರ್, ಗುತ್ತಿಗೆದಾರರವರಿಗೆ ಕೆ.ಟಿ.ಪಿ.ಪಿ. 4(ಎ) ರ ಅಡಿಯಲ್ಲಿ ಕೈಗೊಳ್ಳಲು ನೀಡಿರುವುದರಿಂದ, ಕೈಗೊಂಡಿರುವ ಕ್ರಮಕ್ಕೆ ಸ್ಥಿರೀಕರಣ.

ಮೇಲ್ಕಂಡ ನಾಲ್ಕು (4) ಅಂಶಗಳಿಗೆ ಅನುಮೋದನೆ ಕೋರಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:28–07–2010ರ ಟಿಪ್ಪಣಿ.

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಆಯುಕ್ತರವರ ದಿನಾಂಕ:28–07–2010 ರ ಟಿಪ್ಪಣಿಯನ್ನು ಒಪ್ಪುವುದು".

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

<u>ನಿರ್ಣಯ:</u> "ಆಯುಕ್ತರವರ ದಿನಾಂಕ:28–07–2010 ರ ಟಿಪ್ಪಣಿಯನ್ನು ಒಪ್ಪುವುದೆಂದು ತೀರ್ಮಾನಿಸಲಾಯಿತು".

ಎಸ್.ಕೆ.ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು